ಪ್ರಥಮ ಭಾಷೆಯ ಮಟ್ಟದ 150 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಸಂದರ್ಶನಕ್ಕೆ / ಆಯ್ಕೆಗೆ ಅರ್ಹರಾಗುವುದಿಲ್ಲ ಹಾಗೂ ಈ ಕನ್ನಡ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ.

ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ವಿನಾಯಿತಿ ಬಗ್ಗೆ ಕೆಳಕಂಡ ಷರತ್ತುಗಳನ್ನು ಸೇರ್ಪಡಿಸಲಾಗಿರುತ್ತದೆ.

> "ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಇದೇ ನಿಯಮಗಳಡಿಯಲ್ಲಿ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ ".

ವಿಶೇಷ ಸೂಚನೆ:- (1) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಿದ್ದಲ್ಲಿ ಅಥವಾ ಇತರೆ ಕನ್ನಡ ಭಾಷಾ ಪರೀಕ್ಷೆಗಳಲ್ಲಿ / ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದಂತಹ / ಉನ್ನತ ಮಟ್ಟ ಪರೀಕ್ಷೆಗಳಲ್ಲಿ ಕನ್ನಡ ಭಾಷೆಯನ್ನು ಒಂದು ಭಾಷೆಯನ್ನಾಗಿ ಅಥವಾ ಐಚಿಕ ವಿಷಯವನ್ನಾಗಿ ಅಭ್ಯಸಿಸಿಲ್ಲದಂತಹ ಅಭ್ಯರ್ಥಿಗಳಿಗೆ ಈ ಮೇಲಿನ ವಿನಾಯಿತಿ ಪಡೆಯಲು ಅವಕಾಶ ಇರುವುದಿಲ್ಲ. ಆದುದರಿಂದ, ಇವರು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಲೇಬೇಕಿರುತ್ತದೆ.

(2) ಸದರಿ ಅಧಿಸೂಚನೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಯು ವಿನಾಯಿತಿಯನ್ನು ಕೋರದೇ ಈ ಪರೀಕ್ಷೆ ನಡೆಯುವ ಮುನ್ನ ಆಯೋಗವು ಇದೇ ನಿಯಮಗಳಲ್ಲಿ ನಡೆಸಲಾದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ್ದಲ್ಲಿ ಈ ಪರೀಕ್ಷೆಗೆ ವಿನಾಯಿತಿ ನೀಡಲಾಗುವುದು.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯ ನಿಗದಿತ ಸ್ಥಳದಲ್ಲಿ ವಿವರಗಳನ್ನು ನೀಡತಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಗಳನ್ನು ಪಡೆಯಲು ಅರ್ಹತೆ ನೀಡುವುದಿಲ್ಲ. ಹಾಗೂ ವಿನಾಯಿತಿ ಪಡೆಯಲು ತಪ್ಪಾಗಿ ಮಾಹಿತಿ ನೀಡಿದ ಅಭ್ಯರ್ಥಿಗಳಿಗೆ ಸಂದರ್ಶನದ /ಮೂಲ ದಾಖಲಾತಿ ಪರಿಶೀಲನೆ(ಗ್ರೂಪ್ 'ಸಿ' ಹುದ್ದೆಗಳಿಗೆ) ಮುನ್ನವೇ ಅನರ್ಹಗೊಳಿಸಲಾಗುವುದು. ಮುಂದುವರೆದು, ಅರ್ಜಿಯಲ್ಲಿ ಈ ಮಾಹಿತಿಯನ್ನು / ಇನ್ನಾವುದೇ ಮಾಹಿತಿಯನ್ನು ತಪ್ಪಾಗಿ ನೀಡಿದ್ದಲ್ಲಿ ನಂತರ ಅದನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಎಲ್ಲಾ ವಿಷಯಗಳನ್ನು ಪರಿಶೀಲಿಸಿ, ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಒಪ್ಪಿಗೆಯನ್ನು ನೀಡಬೇಕೆಂದು ಸೂಚಿಸಿದೆ.

5.2 ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) (6ನೇ ತಿದ್ದುಪಡಿ) ನಿಯಮಗಳು, 2015 ರಂತೆ ಗ್ರೂಪ್-'ಎ' ಮತ್ತು 'ಬಿ' ತಾಂತ್ರಿಕ / ತಾಂತ್ರಿಕೇತರ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸಂದರ್ಶನ ಮೂಲಕ ಮಾಡಲಾಗುವುದು. ಗ್ರೂಪ್ "ಸಿ" ತಾಂತ್ರಿಕ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಒಟ್ಟು ಶೇಕಡವಾರು ಅಂಕಗಳ ಮೇರೆಗೆ ಆಯ್ಕೆ ಮಾಡಲಾಗುವುದು.

5.3 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

| ಸ್ಪರ್ಧಾತ್ಮಕ ಪರೀಕ್ಷೆಯು ವಸ್ತು ನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು ಋಣಾತ್ಮಕ ಮೌಲ್ಯಮಾಪನವಿರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ 0.25 ರಷ್ಟು ಅಂಕಗಳನ್ನು ಕಳೆಯಲಾಗುವುದು. **Competitive examination will be of Objective Multiple Choice type and there will be negative valuation. For every each question of which a wrong answer has been given by the candidate, 1/4th (0.25) of the marks assigned for the question will be deducted.** | | | |
|---|---|---|---|
| ಪತ್ರಿಕೆ/ **Paper** | ವಿಷಯ | ಅಂಕಗಳು/ **Marks** | ಅವಧಿ / **Duration** (ಗಂಟೆ / **hours)** |
| **1** | ಸಾಮಾನ್ಯ ಪತ್ರಿಕೆ (**General Paper)** | **200** | **1½** ಗಂಟೆ |
| **2** | ನಿರ್ದಿಷ್ಟ ಪತ್ರಿಕೆ (**Specific Paper)** | **200** | **2** ಗಂಟೆ |

ವಿಶೇಷ ಸೂಚನೆ:–

1. ಸಾಮಾನ್ಯ ಪತ್ರಿಕೆಯು ಎರಡು ಮಟ್ಟದಾಗಿರುತ್ತದೆ. ಒಂದು ಪದವಿ ಮಟ್ಟದ್ದು ಹಾಗೂ ಇನ್ನೊಂದು ಪದವಿಗಿಂತ ಕೆಳ ಮಟ್ಟದ್ದು. ಪದವಿ ಮಟ್ಟದ ವಿದ್ಯಾರ್ಹತೆ ಇರುವಂತಹ ಹುದ್ದೆಗಳಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪದವಿ ಮಟ್ಟದ ಒಂದೇ ಸಾಮಾನ್ಯ ಪತ್ರಿಕೆಯನ್ನು ಬರೆಯಬೇಕಿದ್ದು, ಅದರ ಫಲಿತಾಂಶವನ್ನು ಅವರು ಅರ್ಜಿ ಸಲ್ಲಿಸಿರುವ ಪದವಿ ಮಟ್ಟದ ಇತರೆ ವಿದ್ಯಾರ್ಹತೆ ಇರುವಂತಹ ಹುದ್ದೆಗಳಿಗೂ ಪರಿಗಣಿಸಲಾಗುವುದು. ಇದೇ ರೀತಿ ಪದವಿಗಿಂತ ಕೆಳ ಮಟ್ಟದ ವಿದ್ಯಾರ್ಹತೆ ಇರುವಂತಹ ಹುದ್ದೆಗಳಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪದವಿಗಿಂತ ಕೆಳ ಮಟ್ಟದ ಒಂದೇ ಸಾಮಾನ್ಯ ಪತ್ರಿಕೆಯನ್ನು ಬರೆಯಬೇಕಿದ್ದು, ಅದರ ಫಲಿತಾಂಶವನ್ನು ಅವರು ಅರ್ಜಿ ಸಲ್ಲಿಸಿರುವ ಪದವಿಗಿಂತ ಕೆಳ ಮಟ್ಟದ ಇತರೆ ವಿದ್ಯಾರ್ಹತೆ ಇರುವಂತಹ ಹುದ್ದೆಗಳಿಗೂ ಪರಿಗಣಿಸಲಾಗುವುದು. ಒಂದೇ ವಿದ್ಯಾರ್ಹತೆ/ನಿರ್ದಿಷ್ಟ ಪತ್ರಿಕೆಯ ಪಠ್ಯಕ್ರಮ ಇರುವಂತಹ ಹುದ್ದೆಗಳಿಗೆ ಇದೇ ಕ್ರಮವನ್ನು ಪಾಲಿಸಲಾಗುವುದು.

2. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್/ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್–ಓಎಂಆರ್ ಮಾದರಿ (**Offline-OMR type**) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (**Computer based recruitment test-CBRT**) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (**Computer based recruitment test-CBRT**) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (**Mock test**) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಸೂಚನೆ:– ಕನ್ನಡ ಕಡ್ಡಾಯ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮಗಳ ವಿವರಗಳನ್ನು ಆಯೋಗದ ವೆಬ್‌ಸೈಟ್ “ **http://kpsc.kar.nic.in/ Syllabus** ” ಲಿಂಕ್‌ನಲ್ಲಿ ಬಿತ್ತರಿಸಲಾಗಿದೆ.

ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

| |
|---|
| ಟಿಪ್ಪಣಿ:– ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (**Acknowledgement**) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. |

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ನಿಯಮಾನುಸಾರ ಗ್ರೂಪ್–‘ಎ’ ಮತ್ತು ‘ಬಿ’ ತಾಂತ್ರಿಕ / ತಾಂತ್ರಿಕೇತರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡವಾರು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಪರೀಕ್ಷೆಗೆ / / ಮೂಲ ದಾಖಲೆಗಳ ಪರಿಶೀಲನೆಗೆ / ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

5.4. ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳು:– ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಒಟ್ಟು ಅಂಕಗಳ ಶೇಕಡ 12.5ರಷ್ಟು ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳಾಗಿರುತ್ತವೆ. ಆಯೋಗವು ನಿಯಮಾನುಸಾರ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸಿದ ಅಂಕಗಳ ಶೇಕಡವಾರು ಜೇಷ್ಠತೆಯನ್ನು ಆಧರಿಸಿ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಹುದ್ದೆಗಳ ನೇಮಕಾತಿಗಾಗಿ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ.